ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಮಕ್ಕಳ ದತ್ತು ನೀಡುವಿಕೆ ಹಾಗೂ ಅನಾಥಾಲಯಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

313 (469) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಯಾವುದೇ ಮಗು ಅನಾಥವಾಗದೆ ತಂದೆ ತಾಯಿಯ ಪ್ರೀತಿಯ ಆರೈಕೆಯಲ್ಲಿಯೇ ಬೆಳೆಯಬೇಕೆನ್ನುವ ಮಕ್ಕಳ ಹಕ್ಕುಗಳ ಒಡಂಬಡಿಕೆಯ ಆಶಯಕ್ಕೆ ಅನುಗುಣವಾಗಿ ರಾಜ್ಯದಲ್ಲಿ ಮಕ್ಕಳನ್ನು ದತ್ತು ನೀಡುವುದು ಹಾಗೂ ಅನಾಥಾಲಯ (Foster Care) ದಲ್ಲಿ ಬೆಳೆಸುವುದನ್ನು ಉತ್ತೇಜಿಸಲಾಗುತ್ತಿದೆಯೇ ;

(ಆ) ರಾಜ್ಯದಲ್ಲಿ ಅನಾಥಾಲಯ (Foster Care) ಯೋಜನೆಗೆ ಉತ್ತೇಜನ ನೀಡಲಾಗಿದೆಯೇ ;

(ಇ) ನೀಡಿದ್ದಲ್ಲಿ, ರಾಜ್ಯದಲ್ಲಿ ನೋಂದಾಯಿಸಲಾಗಿರುವ ಅನಾಥಾಲಯ (Foster Care) ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಅನಾಥಾಲಯ (Foster Care) ಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)